## 35. ವೈದ್ಯರ ಮೇಲಿನ ಹಲ್ಲೆಗೆ ಏಳು ವರ್ಷಗಳ ಸಜೆ

ಆರೋಗ್ಯ ರಕ್ಷಣೆ ಕಾರ್ಯಕರ್ತರ ಮೇಲೆ ಹಲ್ಲೆ ನಡೆಸುವುದನ್ನು ಜಾಮೀನುರಹಿತ ಅಪರಾಧ ಎಂದು ಪರಿಗಣಿಸಿರುವ ಕೇಂದ್ರ ಸರ್ಕಾರ ಈ ಸಂಬಂಧ ಕಾಯ್ದೆ ತಿದ್ದುಪಡಿಗಾಗಿ ಸುಗ್ರೀವಾಜ್ಞೆ ಹೊರಡಿಸಲು ನಿರ್ಧರಿಸಿದೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸಚಿವ ಸಂಪುಟ ಸಭೆಯು ಈ ನಿರ್ಧಾರ ಕೈಗೊಂಡಿದ್ದು, ಅಪರಾಧಿಗಳಿಗೆ ಏಳು ವರ್ಷದವರೆಗೆ ಸಜೆ ವಿಧಿಸುವ ಅಂಶವೂ ಸೇರಿದೆ.

ಕೋವಿಡ್–19ರ ವಿರುದ್ಧದ ಹೋರಾಟದಲ್ಲಿ ಮುಂಚೂಣಿಯಲ್ಲಿರುವ ವೈದ್ಯರು ಮತ್ತು ಆರೋಗ್ಯ ಕಾರ್ಯಕರ್ತರನ್ನು ತಾರತಮ್ಯದಿಂದ ನೋಡುವುದು, ಅವರ ಮೇಲೆ ಹಲ್ಲೆ ನಡೆಸುವುದು ಮುಂತಾದ ಪ್ರಕರಣಗಳು ದೇಶದ ಹಲವೆಡೆ ಇತ್ತೀಚೆಗೆ ವರದಿಯಾಗಿದೆ. ಇದನ್ನು ಖಂಡಿಸಿ ಕರಾಳ ದಿನ ಆಚರಿಸಲು ಆರೋಗ್ಯ ಕಾರ್ಯಕರ್ತರು ಮುಂದಾಗಿದ್ದ ಸಂದರ್ಭದಲ್ಲಿಯೇ ಸುಗ್ರೀವಾಜ್ಞೆಯ ನಿರ್ಧಾರ ಹೊರಬಿದ್ದಿದೆ.

123 ವರ್ಷ ಹಳೆಯದಾದ ಸಾಂಕ್ರಾಮಿಕ ರೋಗಗಳ ಕಾಯ್ದೆಗೆ ಈ ಸುಗ್ರೀವಾಜ್ಞೆ ಮೂಲಕ ತಿದ್ದುಪಡಿ ತರಲು ತೀರ್ಮಾನಿಸಿ, ಆರೋಗ್ಯ ಕಾರ್ಯಕರ್ತರ ವಾಹನ ಅಥವಾ ಕ್ಲಿನಿಕ್‌ಗೆ ಹಾನಿ ಆಗಿದ್ದರೆ, ಅದರ ಮಾರುಕಟ್ಟೆ ಮೌಲ್ಯದ ಎರಡು ಪಟ್ಟು ಮೊತ್ತವನ್ನು ವಸೂಲಿ ಮಾಡಲು ತಿದ್ದುಪಡಿಯಲ್ಲಿ ಅವಕಾಶ ಕಲ್ಪಿಸಲಾಗಿದೆ.

ಆಧಾರ:ಪ್ರಜಾವಾಣಿ, ದಿನಾಂಕ:23.04.2020.